# All India Radio: Bangalore
# National Bulletin In Kannada
# 20.02.2026  7.35 pm

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ: ವಿಶ್ವ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಸಭೆ**

**೨. ಅಸ್ಸಾಂನಲ್ಲಿಂದು ವೈಬ್ರೆಂಟ್ ವಿಲೇಜ್ ಪ್ರೋಗ್ರಾಂ ೨.೦ ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ**

**೩. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ: ಹಾಲಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ನಿಯೋಜಿಸುವಂತೆ ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ನಿರ್ದೇಶನ**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಒಮಾನ್ ವಿರುದ್ಧ ಟಾಸ್ ಗೆದ್ದ ಆಸ್ಟ್ರೇಲಿಯಾ ಫೀಲ್ಡಿಂಗ್ ಆಯ್ಕೆ**

**<>><><*><><<>**

ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಲಿಚ್ಟನ್‌ಸ್ಟೈನ್ ರಾಜಕುಮಾರ ಅಲೋಹಿಸ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳ ನಡುವೆ ವಿಶೇಷವಾಗಿ ವ್ಯಾಪಾರ, ಹೂಡಿಕೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಕ್ಷೇತ್ರಗಳಲ್ಲಿ ಎಐ, ನಾವೀನ್ಯತೆ ಮತ್ತು ಕೌಶಲ್ಯಾಭಿವೃದ್ಧಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಯೋಗ ಉತ್ತೇಜಿಸಲು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಸ್ಲೋವಾಕ್ ಗಣರಾಜ್ಯದ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಸಭೆಯಲ್ಲಿ ವ್ಯಾಪಾರ ಮತ್ತು ಹೂಡಿಕೆ, ಡಿಜಿಟಲ್ ತಂತ್ರಜ್ಞಾನ, ರಕ್ಷಣೆ, ಬಾಹ್ಯಾಕಾಶ, ಇಂಧನ, ಸಂಸ್ಕೃತಿ ಮತ್ತು ಜನರಿಂದ ಜನರ ಸಂಪರ್ಕಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರ ಹೆಚ್ಚಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಬಳಿಕ ಪ್ರಧಾನಿ ಅವರು, ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಇಂಧನ, ಸಂಪರ್ಕ, ಮೂಲಸೌಕರ್ಯ, ಆರೋಗ್ಯ ರಕ್ಷಣೆ, ಸಂಸ್ಕೃತಿ, ಕಡಲ ಆರ್ಥಿಕತೆ ಸೇರಿದಂತೆ ಇತರ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವೆ ಸಹಕಾರ ಬಲಪಡಿಸುವ ನಿಟ್ಟಿನಲ್ಲಿ ಚರ್ಚಿಸಿದರು. ಇತ್ತೀಚಿನ ದಿನಗಳಲ್ಲಿ ಭಾರತ-ಶ್ರೀಲಂಕಾ ಸಂಬಂಧಗಳಲ್ಲಿನ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದರು. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಸಭೆಯಲ್ಲಿ ವಿಶ್ವಸಂಸ್ಥೆಯ ಸುಧಾರಣೆಗಳ ಕುರಿತು ತಮ್ಮ ದೃಷ್ಟಿಕೋನಗಳನ್ನು ಉಭಯ ನಾಯಕರು ವಿನಿಮಯ ಮಾಡಿಕೊಂಡಿದರು. ಉತ್ತಮ ಜಗತ್ತಿಗಾಗಿ ಕೃತಕಬುದ್ಧಿಮತ್ತೆಯನ್ನು ಬಳಸಿಕೊಳ್ಳವು ಗುರಿಯನ್ನು ಹೊಂದಿರುವ ಯಾವುದೇ ಪ್ರಯತ್ನಕ್ಕೆ ಭಾರತದ ಬೆಂಬಲವನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದರು.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯ ಸೇವಾತೀರ್ಥದಲ್ಲಿಂದು ಕೃತಕ ಬುದ್ಧಿಮತ್ತೆ ಮತ್ತು ಡೀಪ್ ಟೆಕ್ ನವೋದ್ಯಮಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳೊಂದಿಗೆ ದುಂಡುಮೇಜಿನ ಸಭೆ ನಡೆಸಿದರು. ಕೃಷಿ, ಪರಿಸರ ಮತ್ತು ಮಾತೃಭಾಷೆಯಲ್ಲಿ ಉನ್ನತ ಶಿಕ್ಷಣ ನೀಡುವಲ್ಲಿ ಎಐ ತಂತ್ರಜ್ಞಾನದ ಬಳಕೆಯ ಬಗ್ಗೆ ಅವರು ಚರ್ಚಿಸಿದರು. ಸಭೆಯಲ್ಲಿ ಆರೋಗ್ಯ, ಸೈಬರ್ ಭದ್ರತೆ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ೧೬ ಪ್ರಮುಖ ನವೋದ್ಯಮಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಪಾಲ್ಗೊಂಡು ತಮ್ಮ ಆಲೋಚನೆಗಳು ಮತ್ತು ಕಾರ್ಯಗಳನ್ನು ಪ್ರಸ್ತುಪಡಿಸಿದರು. ದತ್ತಾಂಶ ಆಡಳಿತದ ಅಗತ್ಯವನ್ನು ಒತ್ತಿಹೇಳುತ್ತಾ, ತಪ್ಪು ಮಾಹಿತಿ ಹರಡುವಿಕೆಯ ಬಗ್ಗೆ ಎಚ್ಚರಿಕೆ ನೀಡಿದ ಪ್ರಧಾನಿ, ಭಾರತೀಯ ನವೋದ್ಯಮಗಳು ದೇಶದ ಅಗತ್ಯಕ್ಕೆ ತಕ್ಕಂತೆ ಪರಿಹಾರಗಳನ್ನು ರೂಪಿಸಬೇಕು ಎಂದು ಕರೆ ನೀಡಿದರು.

**<>><><*><><<>**

ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ಜಾಗತಿಕ ಶೈಕ್ಷಣಿಕ ಸಹಯೋಗವನ್ನು ಸಕ್ರಿಯಗೊಳಿಸುತ್ತದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ೨೦೨೬ ರ ಸಂದರ್ಭದಲ್ಲಿ ನಡೆದ ಉನ್ನತ ಶಿಕ್ಷಣದ ಕುರಿತಾದ ಭಾರತ-ಸ್ಪೇನ್ ಸಮ್ಮೇಳನದ ಸಮಾರೋಪ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಸ್ಪೇನ್-ಭಾರತ ರಾಜತಾಂತ್ರಿಕ ಸಂಬಂಧ ೭೦ ವರ್ಷಗಳನ್ನು ಪೂರೈಸುತ್ತಿರುವ ಈ ಸಂದರ್ಭದಲ್ಲಿ ಶಿಕ್ಷಣ, ಸಂಶೋಧನೆ ಮತ್ತು ಇತರೆ ಕ್ಷೇತ್ರಗಳಲ್ಲಿ ಉಭಯ ದೇಶಗಳು ಪರಸ್ಪರ ಸಹಕರಿಸುತ್ತಿವೆ ಎಂದು ಅವರು ಹೇಳಿದರು. ಕೃತಕ ಬುದ್ಧಿಮತ್ತೆ ಮಾನವನ ಸೃಜನಶೀಲತೆ ಮತ್ತು ನೈತಿಕ ಜವಾಬ್ದಾರಿಯನ್ನು ಬಲಪಡಿಸಬೇಕು ಮತ್ತು ಅವುಗಳನ್ನು ಬದಲಾಯಿಸಬಾರದು ಎಂದು ಕೇಂದ್ರ ಸಚಿವರು, ಭಾರತದಲ್ಲಿ ಕ್ಯಾಂಪಸ್‌ಗಳನ್ನು ಸ್ಥಾಪಿಸುವಂತೆ ಸ್ಪೇನ್‌ನ ಪ್ರಮುಖ ವಿಶ್ವವಿದ್ಯಾಲಯಗಳಿಗೆ ಅವರು ಆಹ್ವಾನ ನೀಡಿದರು.

**<>><><*><><<>**

ನವದೆಹಲಿಯಲ್ಲಿ ನಡೆಯುತ್ತಿರುವ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯಲ್ಲಿಂದು ಭಾರತ ಮತ್ತು ಅಮೆರಿಕ ಮಹತ್ವದ ಪ್ಯಾಕ್ಸ್ ಸಿಲಿಕಾ ಘೋಷಣಾ ಪತ್ರಕ್ಕೆ ಸಹಿ ಹಾಕಿವೆ. ಇದು ಸೆಮಿಕಂಡಕ್ಟರ್ ಮತ್ತು ನಿರ್ಣಾಯಕ ಖನಿಜಗಳ ಉತ್ಪಾದನೆ, ವೇಗವಾಗಿ ಬೆಳೆಯುತ್ತಿರುವ ಕೃತಕ ಬುದ್ಧಿಮತ್ತೆ ಕ್ಷೇತ್ರಗಳಲ್ಲಿ ಸುರಕ್ಷಿತ ಮತ್ತು ಸದೃಢ ತಂತ್ರಜ್ಞಾನ ವ್ಯವಸ್ಥೆ ನಿರ್ಮಿಸಲು ಉಭಯ ದೇಶಗಳ ಸಹಕಾರವನ್ನು ಬಲಪಡಿಸಲಿದೆ. ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಸೆಮಿಕಂಡಕ್ಟರ್ ಮತ್ತು ವಿದ್ಯುನ್ಮಾನ ಉದ್ಯಮದಲ್ಲಿ ಜಾಗತಿಕ ನಾಯಕತ್ವ ವಹಿಸುವುದು ಭಾರತದ ಗುರಿಯಾಗಿದೆ. ದೇಶದ ಪ್ರತಿಭಾವಂತ ಎಂಜಿನಿಯರ್‌ಗಳು ಈಗಾಗಲೇ ಅತ್ಯಂತ ಸಂಕೀರ್ಣವಾದ ೨ ನ್ಯಾನೋ ಮೀಟರ್ ಚಿಪ್‌ಗಳನ್ನು ವಿನ್ಯಾಸಗೊಳಿಸುತ್ತಿದ್ದಾರೆ ಎಂದು ತಿಳಿಸಿದರು. ಪ್ರಸ್ತುತ ದೇಶದ ೩೧೫ ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ವಿದ್ಯಾರ್ಥಿಗಳು ಚಿಪ್ ವಿನ್ಯಾಸದಲ್ಲಿ ತೊಡಗಿದ್ದಾರೆ. ಸೆಮಿಕಂಡಕ್ಟರ್ ಉದ್ಯಮಕ್ಕೆ ಅಗತ್ಯವಿರುವ ಸುಮಾರು ಹತ್ತು ಲಕ್ಷಕ್ಕೂ ಹೆಚ್ಚು ಪ್ರತಿಭಾವಂತ ಮಾನವ ಸಂಪನ್ಮೂಲವನ್ನು ದೇಶದೊಳಗೆ ಪೂರೈಸಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಭಾರತಕ್ಕೆ ಅಮೆರಿಕ ರಾಯಭಾರಿ ಸರ್ಗಿಯೋಗಾರ್, ರಕ್ಷಣಾ ಸಹಕಾರದಿಂದ ಪ್ಯಾಕ್ಸ್ ಸಿಲಿಕಾ ವರೆಗಿನ ಭಾರತ-ಅಮೆರಿಕ ಪಾಲುದಾರಿಕೆ ಒಟ್ಟಿಗೆ ಕೆಲಸ ಮಾಡಲು ಇನ್ನೂ ಹೆಚ್ಚಿನ ಬಾಗಿಲುಗಳನ್ನು ತೆರೆಯಲಿದೆ ಎಂದು ಹೇಳಿದ್ದಾರೆ.

**<>><><*><><<>**

ಅಸ್ಸಾಂನ ಕಚಾರ್ ಜಿಲ್ಲೆಯ ಭಾರತ-ಬಾಂಗ್ಲಾದೇಶ ಗಡಿ ಪ್ರದೇಶವಾದ ನಟನ್‌ಪುರದಲ್ಲಿಂದು ವೈಬ್ರೆಂಟ್ ವಿಲೇಜ್ ಪ್ರೋಗ್ರಾಂ ೨.೦ ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಗಡಿ ಪ್ರದೇಶಗಳ ಅಭಿವೃದ್ಧಿಗೆ ಹಲವಾರು ಕ್ರಮಗಳನ್ನು ಕೈಗೊಂಡಿದೆ ಎಂದು ಹೇಳಿದರು. ದೇಶದ ೧೭ ರಾಜ್ಯಗಳ ೩೩೪ ತಾಲೂಕುಗಳು ಮತ್ತು ಒಂದು ಸಾವಿರದ ೯೫೪ ಹಳ್ಳಿಗಳು ಹಾಗೂ ಅಸ್ಸಾಂನ ೧೪೦ ಗಡಿ ಗ್ರಾಮಗಳಲ್ಲಿ ಇದೇ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಭಾರತ-ಪಾಕಿಸ್ತಾನ ಗಡಿಯಲ್ಲಿರುವ ಸುಮಾರು ೨ ಸಾವಿರ ಹಳ್ಳಿಗಳಲ್ಲಿ ಅಭಿವೃದ್ಧಿ ಕಾರ್ಯಗಳು ಪ್ರಾರಂಭವಾಗಿವೆ ಎಂದು ತಿಳಿಸಿದರು. ಅಕ್ರಮ ವಲಸೆಯು ಅಸ್ಸಾಂನಲ್ಲಿ ದೊಡ್ಡ ಸಮಸ್ಯೆ ಆಗಿದೆ. ಹಲವಾರು ಗ್ರಾಮಗಳಲ್ಲಿ ಅಕ್ರಮ ವಲಸಿಗರು ನೆಲೆಸಿದ್ದಾರೆ. ಅಕ್ರಮ ವಲಸೆಯನ್ನು ತಡೆಯಲು ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

**<>><><*><><<>**

ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ಚುನಾವಣಾ ಆಯೋಗಕ್ಕೆ ಸಹಾಯ ಮಾಡಲು ಹಾಲಿ ಮತ್ತು ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ನಿಯೋಜಿಸುವಂತೆ ಸುಪ್ರೀಂ ಕೋರ್ಟ್ ಆಯೋಗಕ್ಕೆ ನಿರ್ದೇಶಿಸಿದೆ. ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೆ. ಬಾಗ್ಚಿ ಮತ್ತು ವಿಪುಲ್ ಎಂ ಪಂಚೋಲಿ ಅವರನ್ನೊಳಗೊಂಡ ನ್ಯಾಯಪೀಠ, ಪಶ್ಚಿಮ

ಬಂಗಾಳದಲ್ಲಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದನ್ನು ಖಚಿತಪಡಿಸಿಕೊಳ್ಳಲು ಹಲವಾರು ಹೊಸ ನಿರ್ದೇಶನಗಳನ್ನು ನೀಡಿತು.

**<>><><*><><<>**

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೧ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

**<>><><*><><<>**

೨೦೧೮ ರಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ನೀಡಿದ್ದ ಹೇಳಿಕೆಗಳಿಗೆ ಸಂಬಂಧಿಸಿದ ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಇಂದು ಉತ್ತರಪ್ರದೇಶದ ಸುಲ್ತಾನಪುರ ಜಿಲ್ಲೆಯ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಹಾಜರಾಗಿ ಹೇಳಿಕೆಗಳನ್ನು ದಾಖಲಿಸಿದ್ದಾರೆ. ಮುಂದಿನ ವಿಚಾರಣೆ ಮಾರ್ಚ್ ೯ ರಂದು ನಡೆಯಲಿದ್ದು, ತಮ್ಮ ಪರವಾಗಿ ಸಾಕ್ಷ್ಯಗಳನ್ನು ಒದಗಿಸುವಂತೆ ರಾಯ್‌ಬರೇಲಿ ಲೋಕಸಭಾ ಸದಸ್ಯ ರಾಹುಲ್ ಗಾಂಧಿ ಅವರಿಗೆ ತಿಳಿಸಲಾಗಿದೆ. ೨೦೧೮ ರ ಕರ್ನಾಟಕ ವಿಧಾನಸಭೆ ಚುನಾವಣೆ ಸಮಯದಲ್ಲಿ ಅಂದಿನ ಬಿಜೆಪಿ ಅಧ್ಯಕ್ಷ ಅಮಿತ್ ಶಾ ವಿರುದ್ಧ ರಾಹುಲ್ ಗಾಂಧಿ ಅವರು ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಸ್ಥಳೀಯ ಬಿಜೆಪಿ ನಾಯಕರೊಬ್ಬರು ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದಾರೆ.

**<>><><*><><<>**

ಶ್ರೀಲಂಕಾದ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ 'ಬಿ' ಗುಂಪಿನ ಕೊನೆಯ ಲೀಗ್ ಪಂದ್ಯದಲ್ಲಿ ಆಸ್ಟ್ರೇಲಿಯಾ ಹಾಗೂ ಒಮಾನ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಆಸ್ಟ್ರೇಲಿಯಾ ತಂಡ, ಫೀಲ್ಡಿಂಗ್  ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಒಮಾನ್, ಇತ್ತೀಚಿನ ವರದಿ ಬಂದಾಗ, ೭  ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೪೭ ರನ್ ಮಾಡಿ ಆಡುತ್ತಿದೆ.

**<>><><*><><<>**

ಇರಾನ್ ತನ್ನ ಪರಮಾಣು ಕಾರ್ಯಕ್ರಮದ ಬಗ್ಗೆ ಒಪ್ಪಂದ ಮಾಡಿಕೊಳ್ಳಬೇಕು ಅಥವಾ ಪರಿಣಾಮಗಳಿಗೆ ಸಿದ್ಧರಾಗಿರಬೇಕು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ವಾಷಿಂಗ್ಟನ್‌ನಲ್ಲಿಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಟ್ರಂಪ್, ಇದಕ್ಕಾಗಿ ೧೦ ರಿಂದ ೧೫ ದಿನಗಳ ಗಡುವನ್ನು ನಿಗದಿಪಡಿಸಿದ್ದಾರೆ. ಇನ್ನೊಂದೆಡೆ, ದಾಳಿಯಾದರೆ ಈ ಪ್ರದೇಶದಲ್ಲಿನ ಅಮೆರಿಕದ ನೆಲೆಗಳ ಮೇಲೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಇರಾನ್ ಬೆದರಿಕೆ ಹಾಕಿದೆ. ಮಧ್ಯಪ್ರಾಚ್ಯದಲ್ಲಿ ಅಮೆರಿಕದ ಬೃಹತ್ ಮಿಲಿಟರಿ ಜಮಾವಣೆಯು ವ್ಯಾಪಕ ಯುದ್ಧದ ಭಯವನ್ನು ಹೆಚ್ಚಿಸಿರುವ ನಡುವೆ, ಉದ್ವಿಗ್ನ ಬಿಕ್ಕಟ್ಟನ್ನು ಕೊನೆಗೊಳಿಸಲು ಇರಾನ್ ಜೊತೆಗಿನ ಮಾತುಕತೆಗಳು ಉತ್ತಮವಾಗಿ ನಡೆಯುತ್ತಿವೆ. ಆದರೆ ಪರಮಾಣು ಒಪ್ಪಂದದ ಬಗ್ಗೆ ಇರಾನ್ ಅರ್ಥಪೂರ್ಣ ಒಪ್ಪಂದಕ್ಕೆ ಮುಂದಾಗಬೇಕು ಎಂದು ಡೊನಾಲ್ಡ್ ಟ್ರಂಪ್ ಒತ್ತಾಯಿಸಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**